ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ.
ಚಾವಿಸನಿನಿ, ಮೈಸೂರು-570017
Telephone No: 0821-234338

CHAMUNDESHWARI ELECTRICITY SUPPLY CORPORATION LIMITED
*(A Government of Karnataka Undertaking)*
Corporate Office,
CESC, Mysuru-570017
Web Site: www.cescmysore.org
E-mail ID:gmhrd@cescmysore.org

Company Identity Number[CIN]:- U40109KA2004SGC035177

ಕ್ರಮಾಂಕ:ಸೆಸ್ಕ್/ಆ ಮತ್ತು ಮಾಸಂ/02/ಇ- 114549 /2024-25/ UYS-95 ದಿನಾಂಕ: 12 APR 2024

**ಸುತ್ತೋಲೆ**

ವಿಷಯ: ಕನ್ನಡ ಭಾಷೆಯನ್ನು ಆಡಳಿತದ ಎಲ್ಲಾಹಂತಗಳಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: ಕನ್ನಡ ಅಭಿವೃದ್ಧಿ ಪ್ರಾಧಿಕಾರ ಹಾಗೂ ವಿಧೇಯಕ ರಾಜ್ಯ ಮಟ್ಟದ ಸಮಿತಿಯ ಸಂಚಾಲಕರು, ಬೆಂಗಳೂರುರವರ ಟಿಪ್ಪಣಿ ಸಂಖ್ಯೆ:ಕಅಪ್ರಾ-ಕಾ/1/02/ಇತರೆ/2021-22(ಭಾಗ-2)/756 ದಿನಾಂಕ:15.03.2024

******

ಕರ್ನಾಟಕ ಸರ್ಕಾರವು ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುವುದು ಕನ್ನಡಿಗರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಕಲ್ಪಿಸುವುದಕ್ಕಾಗಿ ಕನ್ನಡ ಭಾಷೆಯನ್ನು ಆಡಳಿತದ ಎಲ್ಲಾಹಂತಗಳಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಹೊರಡಿಸಿರುವ ಅಧಿಸೂಚನೆ ದಿನಾಂಕ:26.02.2024ರ ಪ್ರತಿ ಹಾಗೂ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-2022ರ ಅನುಷ್ಠಾನದ ಕುರಿತು ಹೊರಡಿಸಲಾಗಿರುವ ಟಿಪ್ಪಣಿ ದಿನಾಂಕ:15.03.2024ರ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸುತ್ತಾ ಎಲ್ಲಾ ಕಛೇರಿಗಳ ಮುಖ್ಯಸ್ಥರು ಮೇಲೆ ತಿಳಿಸಲಾದ ಅಧಿಸೂಚನೆ ಹಾಗೂ ಟಿಪ್ಪಣಿಯ ಆಶಯಗಳನ್ನು ತಮ್ಮ ಆಡಳಿತ ವ್ಯಾಪ್ತಿಯ ಕಛೇರಿಗಳಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾಸಂ)
ಚಾವಿಸನಿನಿ., ಮೈಸೂರು.

ಪ್ರತಿಗಳು:

- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ). ನಿಗಮ ಕಛೇರಿ, ಚಾವಿಸನಿನಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ) ಹಾಗೂ ನಿಯಂತ್ರಣಾಧಿಕಾರಿಗಳು ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ) ಹಾಗೂ ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿ,.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್. ಶಾಖೆ,) ನಿಗಮ ಕಛೇರಿ, ನಿಗಮದ ವೆಬ್‌ಸೆಟ್ ನಲ್ಲಿ ಪ್ರಕಟಿಸಲು.
- ಪೊಲೀಸ್ ಅಧೀಕ್ಷಕರು, ಜಾಗೃತದಳ, ಚಾವಿಸನಿನಿ, ಮೈಸೂರು.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಹಾಗೂ ಲೆಕ್ಕಾಧಿಕಾರಿಗಳು/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನೆ ವಿಭಾಗ, ಚಾವಿಸನಿನಿ,
- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ) ರವರ ತಾಂತ್ರಿಕ ಸಹಾಯಕರು/ ನಿರ್ದೇಶಕರು(ಹಣಕಾಸು) ರವರ ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸುತ್ತಾ, ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ)/ ನಿರ್ದೇಶಕರು (ಹಣಕಾಸು) ರವರುಗಳ ಗಮನಕ್ಕೆ ತರುವಂತೆ ಕೋರಿ.
- ಕಾನ್ಯ( ಆ ಮತ್ತು ಮಾಸಂ)/ಮುಖ್ಯ ಕಡತ.

AGM-2
17/04/2024



71

೨.114549

ಸಂತೋಷ ಹಾನಗಲ್ಲ
ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ

ದೂರವಾಣಿ : ಕಛೇರಿ : ೦೮೦-೨೨೨೮೬೭೭೩
೨೨೦೩೩೨೫೯
ಕೊಠಡಿ ಸಂಖ್ಯೆ : ೨೬೩, ಎರಡನೇ ಮಹಡಿ,
ವಿಧಾನಸೌಧ, ಬೆಂಗಳೂರು-೫೬೦ ೦೦೧

ಸಂಖ್ಯೆ:ಕಅಪ್ರಾ/ಕಾ-1/02/ಇತರೆ/2021-22(ಭಾಗ-2) 1756 ದಿನಾಂಕ 15.03.2024.

## ಟಿಪ್ಪಣಿ

ವಿಷಯ:- ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ – 2022 ರ ಅನುಷ್ಠಾನದ ಕುರಿತು.

ಉಲ್ಲೇಖ:-
1. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ - 2022
2. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ - 2024
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಕಸಂಪಾ 01 ಕಸಧ 2024 ದಿನಾಂಕ 11.03.2024.

* * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕನ್ನಡ ಭಾಷೆಯನ್ನು ಸಾಂವಿಧಾನಿಕ ಚೌಕಟ್ಟಿನಲ್ಲಿ ಉಳಿಸುವ, ಬೆಳೆಸುವ ಮಹತ್ತರ ಜವಾಬ್ದಾರಿಯನ್ನು ಹೊಂದಿರುವ ಕರ್ನಾಟಕ ಸರ್ಕಾರದ ಏಕೈಕ ಸಂವಿಧಾನ ಬದ್ಧ ಸಂಸ್ಥೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ. ಕನ್ನಡ ಭಾಷೆ ಮತ್ತು ಕನ್ನಡಿಗರ ಹಿತಾಸಕ್ತಿಯನ್ನು ಕಾನೂನಿನ್ವಯ ಸಂರಕ್ಷಿಸುವ ಸಲುವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಿರುತ್ತದೆ. ಕನ್ನಡ ಭಾಷೆಯ ಸಮಗ್ರ ಬೆಳವಣಿಗೆಗಾಗಿ ಆಡಳಿತದಲ್ಲಿ ಕನ್ನಡ ಅನುಷ್ಠಾನದ ಪ್ರಾಥಮಿಕ ಜವಾಬ್ದಾರಿಯನ್ನು ನಿರ್ವಹಿಸುತ್ತಾ, ಕನ್ನಡವನ್ನು ಜನಸಮುದಾಯದ ಸಮೀಪಕ್ಕೆ ಕೊಂಡೊಯ್ಯುವ ರಚನಾತ್ಮಕ ಕೆಲಸವನ್ನು ಮಾಡುತ್ತಾ ಬಂದಿದೆ.

ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುವುದು, ಕನ್ನಡಿಗರ ಜೀವನದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಕಲ್ಪಿಸುವುದಕ್ಕಾಗಿ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 28 ಶಾಸನ 2022, ದಿನಾಂಕ 10.03.2023 ರಂತೆ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ – 2022 ಹಾಗೂ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 01 ಶಾಸನ 2024, ದಿನಾಂಕ 26.02.2024 ರಂತೆ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ – 2024 ಕಾಯ್ದೆಗಳನ್ನು ರಾಜ್ಯ ಸರ್ಕಾರ ಜಾರಿಗೆ ತಂದಿರುತ್ತದೆ. ಸದರಿ ಅಧಿನಿಯಮಗಳ ಎಲ್ಲಾ ಉಪಬಂಧಗಳು ದಿನಾಂಕ 12.03.2024 ರಿಂದ ಜಾರಿಗೊಳಿಸಲಾಗಿರುತ್ತದೆ.

ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗದ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಉತ್ತಮ ಅವಕಾಶಗಳನ್ನು ಕಲ್ಪಿಸಲು ಅನುಕೂಲವಾಗುವಂತೆ ತಮ್ಮ ಆಡಳಿತಾತ್ಮಕ ಇಲಾಖೆಗಳಿಗೆ, ಮಂಡಳಿಗಳು / ನಿಗಮ / ಪ್ರಾಧಿಕಾರ/ ಸೊಸೈಟಿಗಳು / ಸ್ವಾಯತ್ತ ಸಂಸ್ಥೆಗಳಿಗೆ, ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಚೇರಿಗಳಲ್ಲಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ ಅಧಿನಿಯಮವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಈ ಮೂಲಕ ಕೋರಿದೆ.

ತಮ್ಮ ವಿಶ್ವಾಸಿ,

**ಕಾರ್ಯದರ್ಶಿ**
ಕನ್ನಡ ಅಭಿವೃದ್ಧಿ ಪ್ರಾಧಿಕಾರ ಹಾಗೂ
ವಿಧೇಯಕ ರಾಜ್ಯ ಮಟ್ಟದ ಸಮಿತಿಯ ಸಂಚಾಲಕರು

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು ವಿಧಾನಸೌಧ, ವಿಕಾಸಸೌಧ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು / ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
3. ರಾಜ್ಯದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
4. ಎಲ್ಲಾ ನಿಗಮ / ಮಂಡಳಿಗಳ ವ್ಯವಸ್ಥಾಪಕ ನಿರ್ದೇಶಕರುಗಳು
5. ರಾಜ್ಯದ ಎಲ್ಲಾ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳು

**ಪ್ರತಿ:**

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಸಲ್ಲಿಸುತ್ತಾ, ಸದರಿ ಮಾಹಿತಿಯನ್ನು ಮಾನ್ಯ ಸಚಿವರು ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಅವಗಾಹನೆಗೆ ತರಲು ಕೋರಲಾಗಿದೆ.
2. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.